# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.15/ಪಿಆರ್: 21 :2021-22 ದಿನಾಂಕ: 05.03.2022

## ದಾಸರಹಳ್ಳಿ ವಾರ್ಡ್-15ರ ವಾರ್ಡ್ ಸಭೆಯ ನಡವಳಿ

ದಿ.05.03.2022 ರಂದು ಬೆಳಗ್ಗೆ 12.30 ಗಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಶ್ರೀ.ಮಲ್ಲಿಕಾರ್ಜುನ್, ಉಪ-ಆಯುಕ್ತರು, ವಾರ್ಡ್ ಕಮಿಟಿ ನೋಡಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು. ಇಂದಿನ ಸಭೆಯಲ್ಲಿ ನಡೆದ ವಾರ್ಡ್ ಸಮಿತಿ ನಡವಳಿಗಳು.

**ಹಾಜರಿದ್ದವರು:**

1. ಶ್ರೀ.ಮಲ್ಲಿಕಾರ್ಜುನ್, ಉಪ-ಆಯುಕ್ತರು, ವಾರ್ಡ್ ಕಮಿಟಿ ನೋಡಲ್ ಆಫೀಸರ್, ದಾಸರಹಳ್ಳಿ ವಾರ್ಡ್ ನಂ.15
2. ಶ್ರೀ.ವೆಂಕಟೇಶಪ್ಪ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ದಾಸರಹಳ್ಳಿ ವಾರ್ಡ್ ನಂ.15
3. ಶ್ರಿ.ಪಾರ್ಥ, ಹಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
4. ಶ್ರೀಮತಿ.ಪವಿತ್ರ & ಶ್ಯಾಮಲಾ, ಲಿಂಕ್‌ವರ್ಕರ್ಸ್, ಬಿಬಿಎಂಪಿ, ದಾಸರಹಳ್ಳಿ
5. ಶ್ರೀ.ಚಂದ್ರಶೇಖರ್, ವಾರ್ಡ್ ಸಮಿತಿ ಸದಸ್ಯರು, ದಾಸರಹಳ್ಳಿ
6. ಶ್ರೀ.ವಿಜಯಕುಮಾರ್ ಜೆ, ಬಿಬಿಎಂಪಿ ಮಾರ್ಷಲ್
7. ಶ್ರೀ.ಮಂಜುನಾಥ್, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಇನ್ಸ್‌ಪೆಕ್ಟರ್
8. ಶ್ರೀಮತಿ.ತ್ರಿವೇಣಿ, ಕಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
9. ಶ್ರೀ.ಮರಿಸಿದ್ದಪ್ಪ, ವಾರ್ಡ್ ಸಮಿತಿ ಸದಸ್ಯರು, ದಾಸರಹಳ್ಳಿ
10. ಶ್ರೀ.ಬಾಲಕೃಷ್ಣ, ಘನತ್ಯಾಜ್ಯ ಮೇಲ್ವಿಚಾರಕರು, ಬಿಬಿಎಂಪಿ
11. ಶ್ರೀ.ಮುನಿರಾಜು, ವಾರ್ಡ್ ಸಮಿತಿ ಸದಸ್ಯರು, ದಾಸರಹಳ್ಳಿ

ನೋಡೆಲ್ ಅಧಿಕಾರಿಗಳು ವಾರ್ಡ್ ನಂ.15, ದಾಸರಹಳ್ಳಿ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಗೂ ಹಾಜರಿದ್ದ ಅಧಿಕಾರಿಗಳನ್ನು ಸ್ವಾಗತಿಸಿ ಮಾತನಾಡುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರತೀ ವಾರ್ಡ್‌ಗೆ ನೋಡೆಲ್ ಅಧಿಕಾರಿಗಳನ್ನು ನೇಮಿಸಿ, ಸಾರ್ವಜನಿಕ ಕುಂದುಕೊರತೆ ನಿವಾರಣಾ ಸಂಬಂಧ ಪ್ರತೀ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಸಭೆ ಸೇರಿ ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸಿ, ಅಗತ್ಯ ಕ್ರಮವಹಿಸಲು ಸೂಚಿಸಿರುವುದಾಗಿ ತಿಳಿಸಿದರು.

1. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.

ಘನತ್ಯಾಜ್ಯ ನಿರ್ವಹಣೆಯ ಸಂಬಂಧ ವಾರ್ಡ್‌ನಲ್ಲಿ 19 ಆಟೋಗಳು, ಒಣ ಕಸ ಸಂಗ್ರಹಣಾ ಆಟೋ–03, ಹಾಗೂ 02 ಕಾಂಪ್ಯಾಕ್ಟರ್ ವಾಹನಗಳು ಘನತ್ಯಾಜ್ಯ ವಿಲೇವಾರಿಗಾಗಿ ನಿಯೋಜಿಸಲಾಗಿರುತ್ತದೆಂದು ವಾರ್ಡ್ ಸಮಿತಿ ಸಭೆಯಲ್ಲಿ ಕಿರಿಯ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿದರು.

ದಾಸರಹಳ್ಳಿ ವಾರ್ಡ್ ವ್ಯಾಪ್ತಿಯ ರಸ್ತೆ ಬದಿಗಳಲ್ಲಿ ಹಾಗೂ ಖಾಲಿ ನಿವೇಶನಗಳಲ್ಲಿ ಸಾರ್ವಜನಿಕರು ಕಸ ಹಾಕುತ್ತಿದ್ದು, ಇದರಿಂದ ಸೊಳ್ಳೆಗಳು ಹೆಚ್ಚಾಗಿ ಸಾಂಕ್ರಾಮಿಕ ರೋಗ ಹರಡುವ ಸಾಧ್ಯತೆ ಹೆಚ್ಚಾಗಿರುವುದರಿಂದ ಸಾರ್ವಜನಿಕರಿಗೆ ಅರಿವು ಮೂಡಿಸಿ, ಮನೆ ಮನೆಗೆ ತೆರಳುವ ಘನತ್ಯಾಜ್ಯ ಸಂಗ್ರಹಣಾ ಆಟೋಗಳಿಗೆ ಕಸವನ್ನು ನೀಡುವ ಬಗ್ಗೆ ಆರೋಗ್ಯ ಪರಿವೀಕ್ಷಕರಿಗೆ ಸದಸ್ಯ ಕಾರ್ಯದರ್ಶಿಗಳು ಸೂಚಿಸಿದರು.

2.ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.

ದಾಸರಹಳ್ಳಿ ವಾರ್ಡ್ ನಂ.15ರಲ್ಲಿ ರಸ್ತೆಯಲ್ಲಿ ಉಂಟಾಗಿರುವ ಗುಂಡಿಗಳನ್ನು ಮುಚ್ಚುವ ಕಾಮಗಾರಿಯು ಪೂರ್ಣಗೊಂಡಿದ್ದು, ವಾರ್ಡ್‌ನ ಹಲವಾರು ಭಾಗಗಳಾದ ಕೆಂಪೇಗೌಡನಗರ, ಮಾಡೆಲ್ ಕಾಲೋನಿ, ಕಾಳಾಸ್ತ್ರಿನಗರ ಹಾಗೂ ಇತರೆ ಬಡಾವಣೆಗಳ ರಸ್ತೆಗಳಿಗೆ ಮರು ಡಾಂಬರೀಕರಣ ಮಾಡಲು ಉದ್ದೇಶಿಸಿ, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

3. ಬಿ.ಡಬ್ಲ್ಯೂ.ಎಸ್.ಎಸ್.ಬಿ ಹಾಗೂ ಬೆಸ್ಕಾಂಗೆ ಸಂಬಂಧಿಸಿದ ಬಗ್ಗೆ.

ದಾಸರಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆಯವರು ರಸ್ತೆಗಳನ್ನು ಅಗೆದು ಕೇಬಲ್‌ಗಳನ್ನು ಅಳವಡಿಸುವ ಕಾಮಗಾರಿಯನ್ನು ನಿರ್ವಹಿಸಲು ಸಾರ್ವಜನಿಕ ರಸ್ತೆಗಳನ್ನು ಅಗೆದು ಹಾಳುಮಾಡುತ್ತಿರುವುದರಿಂದ ವಾಹನ ಸಂಚಾರಕ್ಕೆ ಹಾಗೂ ಸಾರ್ವಜನಿಕ ಓಡಾಟಕ್ಕೆ ತೊಂದರೆ ಉಂಟಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಿ ರಸ್ತೆಗಳನ್ನು ತುರ್ತಾಗಿ ಸರಿಪಡಿಸುವ ಬಗ್ಗೆ ಕ್ರಮವಹಿಸಲು ವಾರ್ಡ್ ಅಭಿಯಂತರರು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರುವುದಾಗಿ ಸಭೆಯಲ್ಲಿ ತಿಳಿಸಿದರು. ಹಾಗೂ ಕೇಬಲ್ ಅಳವಡಿಸುವ ಸಮಯದಲ್ಲಿ ರಸ್ತೆ ತಳಭಾಗದಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದ ಅಳವಡಿಸಿರುವ ನೀರಿನ ಪೈಪ್‌ಗಳು ಹಾಗೂ ಒಳಚರಂಡಿ ಪೈಪ್‌ಗಳು ಹಾಳಾಗಿದ್ದು, ತುರ್ತಾಗಿ ದುರಸ್ಥಿಪಡಿಸಲು ಸಂಬಂಧಿಸಿದ ಬೆಸ್ಕಾಂ ಇಲಾಖೆಗೆ ಸೂಚಿಸಲಾಯಿತು.

4. ಇತರೆ ವಿಷಯಗಳ ಬಗ್ಗೆ:

- ಮುಂದಿನ ಸಭೆಗೆ ಕಲ್ಯಾಣ ಇಲಾಖೆ, ಬೆಸ್ಕಾಂ ಇಲಾಖೆ, ಪೋಲೀಸ್ ಇಲಾಖೆಗಳಿಂದ ಅಧಿಕಾರಿಗಳು ಹಾಜರಾಗಲು ಸೂಚಿಸಲಾಯಿತು.
- ಕಾಳಾಸ್ತ್ರಿನಗರ ಶಾಲೆಯ ಹಿಂಭಾಗದಲ್ಲಿ ಎಸ್.ಡಬ್ಲ್ಯೂ.ಡಿ ಡ್ರೈನ್ ಕುಸಿದಿದ್ದು, ತುರ್ತಾಗಿ ದುರಸ್ಥಿಪಡಿಸಲು ಹಾಗೂ ಎಸ್.ಡಬ್ಲ್ಯೂ.ಡಿ ಚರಂಡಿಯಲ್ಲಿ ತುಂಬಿರುವ ಹೂಳನ್ನು ತೆಗೆಯಲು ಸಂಬಂಧಿಸಿದ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

- ವಾರ್ಡ್ ವ್ಯಾಪ್ತಿಯ ಅಯ್ಯಪ್ಪ ದೇವಸ್ಥಾನ ರಸ್ತೆ, ಕಾಳಹಸ್ತಿ ನಗರದ ಮುಖ್ಯರಸ್ತೆಗಳಲ್ಲಿ ಬೀದಿ ದೀಪಗಳ ಸಮರ್ಪಕ ನಿರ್ವಹಣೆ ಆಗದೇ ಇರುವ ಬಗ್ಗೆ ವಾರ್ಡ್ ಸದಸ್ಯರು ಸೂಚಿಸಿದ್ದು, ಅದರಂತೆ ಸಂಬಂಧಿಸಿದ ಗುತ್ತಿಗೆದಾರರಿಗೆ ಸಮರ್ಪಕವಾಗಿ ಬೀದಿ ದೀಪಗಳ ನಿರ್ವಹಣೆ ಮಾಡಲು ಸೂಚಿಸಲಾಯಿತು.

ಅಂತಿಮವಾಗಿ ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು, ಕ್ರಮ ತೆಗೆದುಕೊಂಡ ಬಗ್ಗೆ ಎಲ್ಲಾ ಇಲಾಖೆಗಳ ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಹಾಗೂ ಮುಂದಿನ ಸಭೆಗೆ ಎಲ್ಲಾ ಇಲಾಖೆಯಿಂದ ಅಧಿಕಾರಿಗಳು ಸಭೆಗೆ ಹಾಜರಾಗಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ವಾರ್ಡ್ ನೋಡಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 15, ದಾಸರಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧಿಕಾರಿಗಳ ಮಾಹಿತಿಗಾಗಿ

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.